## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 834 (847) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಡಿ.ಟಿ.ಶ್ರೀನಿವಾಸ್ |
| ಉತ್ತರಿಸುವ ದಿನಾಂಕ | : | 24-08-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| | | |
|---|---|---|
| ಅ) | ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನಕ್ಕೆ ಎಷ್ಟು ಅನುದಾನ ನಿಗದಿಪಡಿಸಲಾಗಿದೆ; | ಸಮಾಜ ಕಲ್ಯಾಣ ಇಲಾಖೆಯಿಂದ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.<br><br>2026-27ನೇ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ನಿಗದಿಯಾದ ಅನುದಾನದ ವಿವರ ಈ ಕೆಳಕಂಡಂತಿದೆ. |

| ಕಾರ್ಯಕ್ರಮ | ನಿಗದಿಯಾದ ಅನುದಾನ (ರೂ.ಕೋಟಿಗಳಲ್ಲಿ) |
|---|---|
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ) | 66.00 |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) | 70.00 |
| ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 273.00 |

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನಕ್ಕಾಗಿ ಪ್ರಸಕ್ತ ಸಾಲಿನಲ್ಲಿ ರೂ.270.21 ಕೋಟಿ ಅನುದಾನ ನಿಗಧಿಪಡಿಸಲಾಗಿದೆ.

| | | |
|---|---|---|
| ಆ) | ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿ ವೇತನಕ್ಕಾಗಿ ಸಲ್ಲಿಸಿದ ಅರ್ಜಿಗಳೆಷ್ಟು; ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಸಮಾಜ ಕಲ್ಯಾಣ ಇಲಾಖಾ ವತಿಯಿಂದ 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸಿದ ಹಾಗೂ ವಿದ್ಯಾರ್ಥಿವೇತನ ಪಾವತಿ ಮಾಡಿದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ. |

| ಕಾರ್ಯಕ್ರಮ | ಸ್ವೀಕೃತವಾದ ಅರ್ಜಿಗಳ ಸಂಖ್ಯೆ | ಮಂಜೂರಾದ ವಿದ್ಯಾರ್ಥಿಗಳ ಸಂಖ್ಯೆ | ಪಾವತಿಯಾದ ವಿದ್ಯಾರ್ಥಿಗಳ ಸಂಖ್ಯೆ | ಪಾವತಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ |
|---|---|---|---|---|
| **2023-24** | | | | |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ | 10,40,313 | 9,48,042 | 9,48,042 | - |
| ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 3,45,068 | 3,42,692 | 3,42,692 | - |

| | | | | |
|---|---|---|---|---|
| **2024-25** | | | | |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ | 9,96,032 | 9,37,385 | 9,37,385 | - |
| ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 3,52,959 | 3,52,300 | 3,52,300 | - |
| **2025-26** | | | | |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ | 8,26,352 | 8,25,209 | 8,25,144 | 65 |
| ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 3,44,201 | 3,43,749 | 3,41,883 | 1,866 |

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಹಾಗೂ ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿಗಳ ವಿವರ ಕೆಳಕಂಡಂತಿದೆ.

| ಕ್ರ. ಸಂ | ವರ್ಷ | ಸ್ವೀಕೃತಿ | ಮಂಜೂರಾತಿ | ಪಾವತಿ |
|---|---|---|---|---|
| 1 | 2023-24 | 544712 | 517025 | 459355 |
| 2 | 2024-25 | 531913 | 526661 | 487165 |
| 3 | 2025-26 | 459322 | 456201 | 390570 |
| | **ಒಟ್ಟು** | **1535947** | **1499887** | **1337090** |

ಇ) ವಿದ್ಯಾರ್ಥಿವೇತನ ಪಾವತಿಯಲ್ಲಿ ವಿಳಂಬವಾಗಲು ಕಾರಣವೇನು; ಬಾಕಿಯಿರುವ ವಿದ್ಯಾರ್ಥಿವೇತನವನ್ನು ಯಾವ ಅವಧಿಯಲ್ಲಿ ಪಾವತಿಸಲಾಗುವುದು:

**ಪಾವತಿಗೆ ಬಾಕಿ ಉಳಿದಿರಲು ಕಾರಣಗಳು:**

ವಿದ್ಯಾರ್ಥಿವೇತನದ ಮೊತ್ತ ಬಾಕಿ ಉಳಿದಿರುವ ಅರ್ಜಿಗಳು ಬಹುತೇಕ ಆಧಾರ್ ಜೋಡಣೆ/ಬ್ಯಾಂಕ್ ಖಾತೆ ಅಥವಾ ಆಧಾರ್ Inactive ಆದ ಕಾರಣ ಬಾಕಿ ಉಳಿದಿರುತ್ತದೆ.

**ಬಾಕಿ ಮೊತ್ತವನ್ನು ಪಾವತಿಸಲು ಇಲಾಖೆಯಿಂದ ಕೈಗೊಂಡ ಕ್ರಮಗಳು:**

1. ಆಧಾರ್/ಬ್ಯಾಂಕ್ ಖಾತೆಯನ್ನು ಚಾಲ್ತಿಯಲ್ಲಿಡುವಂತೆ ವಿದ್ಯಾರ್ಥಿಗಳಿಗೆ SMS, IVR ಕರೆಗಳನ್ನು ಇಲಾಖೆಯ ವತಿಯಿಂದ ಮಾಡುವ ಮೂಲಕ ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ಅರಿವು ಮೂಡಿಸಲಾಗಿರುತ್ತದೆ.
2. ಶಾಲೆ/ಕಾಲೇಜುಗಳ ಹಂತದಲ್ಲಿಯೇ ಸದರಿ ಸಮಸ್ಯೆಯನ್ನು ಬಗೆಹರಿಸುವ ಸಂಬಂಧ ಪ್ರತಿ ಶಾಲೆ/ಕಾಲೇಜುಗಳಲ್ಲಿ ಒಬ್ಬ ಜವಾಬ್ದಾರಿಯುತ ನೋಡಲ್ ಅಧಿಕಾರಿಯನ್ನು ನಿಯೋಜನೆ ಮಾಡಲಾಗಿರುತ್ತದೆ. ಸದರಿ ನೋಡಲ್ ಅಧಿಕಾರಿಗಳಿಗೆ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಸೂಕ್ತ ತರಬೇತಿಯನ್ನು ನೀಡಲಾಗಿರುತ್ತದೆ.
3. ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿದ್ಯಾರ್ಥಿವೇತನ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ.
4. ಜಾಹಿರಾತು ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗಿರುತ್ತದೆ.

ಈ) ತಮ್ಮ ಇಲಾಖೆ ವ್ಯಾಪ್ತಿಯಲ್ಲಿರುವ ಸರ್ಕಾರಿ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ಸ್ವಂತ ಕಟ್ಟಡಗಳಿವೆ ಮತ್ತು ಎಷ್ಟು ಬಾಡಿಗೆ ಕಟ್ಟಡಗಳಿವೆ;

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1213 ಮೆಟ್ರಿಕ್ ಪೂರ್ವ ಮತ್ತು 731 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಸೇರಿದಂತೆ ಒಟ್ಟಾರೆ 1,944 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳ ಪೈಕಿ 1711 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 233 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

| | | |
|---|---|---|
| ಉ) | ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಸಲ್ಲಿಸಿ ಅವಕಾಶ ವಂಚಿತರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅಂತವರಿಗೆ ಸರ್ಕಾರ ಬೇರೆ ಅವಕಾಶ ಕಲ್ಪಿಸಲು ಯೋಜನೆಗಳನ್ನು ರೂಪಿಸಿದೆಯೇ; ಇದ್ದಲ್ಲಿ, ಕ್ರಮಗಳೇನು; | ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.<br><br>ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುವ ವಿದ್ಯಾರ್ಥಿ ನಿಲಯಗಳ ಕಟ್ಟಡದ ಸಾಮರ್ಥ್ಯನುಸಾರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ ಹೆಚ್ಚುವರಿ ವಿದ್ಯಾರ್ಥಿಗಳನ್ನು ಬಾಡಿಗೆ ಕಟ್ಟಡ ಪಡೆದು ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.<br><br>2026-27ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ-182ರನ್ವಯ 150 ಸಂಖ್ಯಾಬಲದ 62 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವುದಾಗಿ ಘೋಷಣೆಯಾಗಿದ್ದು, ಅದರಂತೆ ಆದೇಶ ಹೊರಡಿಸಲಾಗಿರುತ್ತದೆ. ಹೆಚ್ಚಿನ ಬೇಡಿಕೆ ಇರುವ ಜಿಲ್ಲೆಗಳಿಗೆ ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| ಊ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರವು ಪ್ರತಿವರ್ಷ ಅನುದಾನ ಮೀಸಲಿಡುತ್ತಿದ್ದರೂ, ಅನೇಕ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಸಮಯಕ್ಕೆ ಸರಿಯಾಗಿ ತಲುಪುತ್ತಿಲ್ಲ; ಈ ವಿಳಂಬಕ್ಕೆ ಕಾರಣವೇನು ಮತ್ತು ನಿಗದಿತ ಅವಧಿಯಲ್ಲಿ ಸೌಲಭ್ಯ ತಲುಪಿಸಲು ಸರ್ಕಾರ ಕೈಗೊಂಡಿರುವ ಖಚಿತ ಕ್ರಮಗಳೇನು? | ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖಾವತಿಯಿಂದ ಸಮುದಾಯದವರ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ವಿವರವನ್ನು **ಅನುಬಂಧದಲ್ಲಿ** ನೀಡಿದೆ.<br><br>ಸದರಿ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಹೊರಡಿಸಲಾದ ಆದೇಶಗಳು, ಮಾರ್ಗಸೂಚಿ/ನಿರ್ದೇಶನಗಳು ಹಾಗೂ ಸುತ್ತೋಲೆಗಳನ್ನು ಅನುಸರಿಸಿ ಸದರಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. |

**ಸಕಇ 791 ಪಕವಿ 2026**

**(ಕೆ.ಹೆಚ್.ಮುನಿಯಪ್ಪ)**
**ಸಮಾಜ ಕಲ್ಯಾಣ ಸಚಿವರು**

ಅನುಬಂಧ-ಅ

ಸಮಾಜ ಕಲ್ಯಾಣ ಇಲಾಖೆ:-

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ವಿಧಾನ ಪರಿಷತ್ತಿನ ಸದಸ್ಯರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 847ಕ್ಕೆ ಮಾಹಿತಿ

- ಅನುಷ್ಠಾನಗೊಳಿಸುತ್ತಿರುವ ಪ್ರಮುಖ ಕಾರ್ಯಕ್ರಮಗಳ ವಿವರ:
    1. ಶೈಕ್ಷಣಿಕ ಅಭಿವೃದ್ಧಿ
    2. ಆರ್ಥಿಕ ಅಭಿವೃದ್ಧಿ
    3. ಸಾಮಾಜಿಕ ಸಬಲೀಕರಣ

1. ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು:

ಅ) ವಿದ್ಯಾರ್ಥಿ ನಿಲಯಗಳು/ವಸತಿ ಶಾಲೆಗಳ ನಿರ್ವಹಣೆ:

ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರೋತ್ಸಾಹ ನೀಡಲು ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. ವಿವರ ಈ ಕೆಳಕಂಡಂತಿದೆ

| ಕ್ರ.ಸಂ. | ಸಂಸ್ಥೆಗಳ ವಿವರ | ಸಂಖ್ಯೆ |
|---|---|---|
| 1. | ವಸತಿ ಶಾಲೆ | 67 |
| 2 | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ | 1213 |
| 3. | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ | 731 |
| | ಒಟ್ಟು | **2011** |

- 2.14.001 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಿದೆ.

ನಿಲಯಾರ್ಥಿಗಳಿಗೆ ಒದಗಿಸುತ್ತಿರುವ ಸೌಲಭ್ಯಗಳ ವಿವರ

| ವಿವರ | ವಸತಿ ಶಾಲೆ | ಮೆ.ಪೂರ್ವ ವಿ.ನಿಲಯ | ಮೆ.ನಂತರ ವಿ.ನಿಲಯ |
|---|---|---|---|
| ಬೋಜನ ವೆಚ್ಚ (ಮಾಸಿಕ) | 1,550/- | 1,750/- | 1,850/- |

ಇತರೆ ಸೌಲಭ್ಯಗಳು :-

ಸಮವಸ್ತ್ರ (2ಜೊತೆ), ಬರ್ಕ್/ನೋಟ್ ಪುಸ್ತಕ, ಶುಚಿ ಸಂಭ್ರಮ ಕಿಟ್, ಶೂ, ಕ್ಷೌರ ವೆಚ್ಚ, ದಿನಪತ್ರಿಕೆ/ Magazine ವೈದ್ಯಕೀಯ ವೆಚ್ಚ, ಸ್ವಚ್ಛತೆ ವೆಚ್ಚ, ಮಂಚ, ಹಾಸಿಗೆ, ಹೊದಿಕೆ, ದಿಂಬು, ಜಮಖಾನ, ಕ್ರೀಡಾ ಸಾಮಗ್ರಿಗಳು ಹಾಗೂ ಇತರೆ ಮೂಲಭೂತ ಸೌಲಭ್ಯಗಳು.

**ಆ) ವಿದ್ಯಾರ್ಥಿವೇತನ:**

**ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (ಡೇ ಸ್ಕಾಲರ್)**

ವಿದ್ಯಾರ್ಥಿನಿಲಯಗಳಲ್ಲಿ ಇಲ್ಲದೇ ಇರುವ ಪರಿಶಿಷ್ಟ ಜಾತಿ 1 ರಿಂದ 8ನೇ ತರಗತಿಯವರೆಗಿನ ವಿದ್ಯಾರ್ಥಿಗಳು ತಮ್ಮ ವ್ಯಾಸಂಗವನ್ನು ಮುಂದುವರೆಸುವಂತೆ ಪ್ರೋತ್ಸಾಹಿಸಲು ಹಾಗೂ ವಿದ್ಯಾಭ್ಯಾಸದ

Scanned with OKEN Scanner

ನಡುವೆ ಶಾಲೆ ಬಿಡುವುದನ್ನು ತಪ್ಪಿಸಲು ಮತ್ತು ಪಾಲಕರು ಮಕ್ಕಳನ್ನು ಶಾಲೆಗೆ ಕಳುಹಿಸುವಂತೆ ಉತ್ತೇಜಿಸಲು ಮೆಟ್ರಿಕ್‌ಪೂರ್ವ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.

| ತರಗತಿ | ಬಾಲಕರು | ಬಾಲಕಿಯರು |
|---|---|---|
| 1 ರಿಂ 5 | 1000/- | 1100/- |
| 6 ರಿಂ 7 | 1150/- | 1250/- |
| 8ನೇ ತರಗತಿ | 1250/- | 1350/- |

**ಮೆಟ್ರಿಕ್ ಪೂರ್ವ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ - ಕೇಂದ್ರ ಪುರಸ್ಕೃತ ಯೋಜನೆ**

| ತರಗತಿ | ಬಾಲಕರು | ಬಾಲಕಿಯರು |
|---|---|---|
| 9 ರಿಂದ 10 | 3,500/- | 3,500/- |

**ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ (ವಾರ್ಷಿಕ)**

| ಗುಂಪು | ಕೋರ್ಸ್‌ಗಳು | Hosteller ಮಾಹೆಯಾನ | Day scholar ಮಾಹೆಯಾನ |
|---|---|---|---|
| I. | Bachelor, Master Degree, M.phil/PhD degree leading to Degree, PG Diploma in professional courses in various streams | 13,500 | 7,000 |
| II. | All non-professional recognized courses leading to a Bachelor, Master Degree, M.Phil/PhD degree not covered under Group I in Arts, Science and Commerce like BA/B.Sc/B.com or MA/MSc/M.COM | 9,500 | 6,500 |
| III. | Vocational stream, ITI courses, 3 year diploma courses in Polytechnics, etc | 6,000 | 3,000 |
| IV. | All post-matriculation level non-degree courses for which entrance qualification is High School (Class X), e.g. senior secondary certificate (class XI and XII). | 4,000 | 2,500 |

**ಇ) ಪ್ರೋತ್ಸಾಹಧನ ಯೋಜನೆ: ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆ:**

ಪ್ರಥಮ ಪ್ರಯತ್ನದಲ್ಲಿ ಪ್ರದಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಈ ಕೆಳಗಿನಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

Scanned with OKEN Scanner

| ಕೋರ್ಸ್‌ನ ವಿವರ | | ಪ್ರೋತ್ಸಾಹಧನ (ರೂ.ಗಳಲ್ಲಿ) |
|---|---|---|
| ಎಸ್.ಎಸ್.ಎಲ್.ಸಿ | ಶೇ 60 ರಿಂದ ಶೇ 75 | 7,000/- |
| | ಶೇ 75 ಕ್ಕಿಂತ ಮೇಲ್ಪಟ್ಟು | 15,000/ |
| ಪಿ.ಯು.ಸಿ/ ಡಿಪ್ಲೋಮ | | 20,000/- |
| ಪದವಿ | | 25,000/- |
| ಸ್ನಾತಕೋತ್ತರ ಪದವಿ | | 30,000/- |
| ವೃತ್ತಿಪರ ಪದವಿ (ವೈದ್ಯಕೀಯ/ತಾಂತ್ರಿಕ/ಕೃಷಿ/ಪಶುವೈದ್ಯಕೀಯ) | | 35,000/- |
| ವಿಶ್ವವಿದ್ಯಾಲಯ ಮಟ್ಟದಲ್ಲಿ PG Courses ವಿವಿಧ ವಿಷಯಗಳಲ್ಲಿ ಗಳಲ್ಲಿ 1 ರಿಂದ 5 ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ | | 50,000/- |

ಈ) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗದು ಪ್ರಶಸ್ತಿ:-

ಸ್ವಾತಂತ್ರ್ಯ ಹೋರಾಟದ ಭಾಗವಾದ ಹಲಗಲಿ ಬೇಡರ ಬಂಡಾಯದಲ್ಲಿ ಹುತಾತ್ಮರಾದ ಜಡಗ ಮತ್ತು ಬಾಲ ಇವರ ಹೆಸರಿನಲ್ಲಿ ಪ್ರತಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ನಗದು ಪ್ರಶಸ್ತಿ ನೀಡಲಾಗುತ್ತಿದೆ

ಉ) ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಅವಕಾಶ :-

ರಾಜ್ಯ ಮಟ್ಟದ ಸಮಿತಿಯಿಂದ ಆಯ್ಕೆ ಮಾಡಲಾದ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿ ಮೂಲಕ ಆಯ್ಕೆಗೊಂಡು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲಾಗುತ್ತಿದೆ.

ಊ) ರಾಷ್ಟ್ರೀಯ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಧನಸಹಾಯ:

ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ಐ.ಐ.ಎಂ/ಐ.ಎಂ.ಐ/ಎನ್ ಐ.ಟಿ/ಇತ್ಯಾದಿ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಒಂದು ಬಾರಿಗೆ ರೂ.2.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ.

ಆಯುಕ್ತರ ಪರವಾಗಿ
ಸಮಾಜ ಕಲ್ಯಾಣ ಇಲಾಖೆ.
ಬೆಂಗಳೂರು

Scanned with OKEN Scanner

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ:

# ಅನುಬಂಧ

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ವಿಧಾನ ಪರಿಷತ್ತಿನ ಸದಸ್ಯರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 847ಕ್ಕೆ ಅನುಬಂಧ**

- **ಅನುಷ್ಠಾನಗೊಳಿಸುತ್ತಿರುವ ಪ್ರಮುಖ ಕಾರ್ಯಕ್ರಮಗಳ ವಿವರ:**

1. ಶೈಕ್ಷಣಿಕ ಅಭಿವೃದ್ಧಿ
2. ಆರ್ಥಿಕ ಅಭಿವೃದ್ಧಿ
3. ಸಾಮಾಜಿಕ ಸಬಲೀಕರಣ

## 1. ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು

### ಅ) ವಿದ್ಯಾರ್ಥಿನಿಲಯಗಳು/ವಸತಿ ಶಾಲೆಗಳ ನಿರ್ವಹಣೆ:

ಪ.ಪಂಗಡದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರೋತ್ಸಾಹ ನೀಡಲು ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ ಮತ್ತು ವಿದ್ಯಾರ್ಥಿ ನಿಲಯಗಳನ್ನು ನಿರ್ವಹಣೆ ಮಾಡಲಾಗುತ್ತಿದೆ ವಿವರ ಈ ಕೆಳಕಂಡಂತಿದೆ

| ಕ್ರ.ಸಂ. | ಸಂಸ್ಥೆಗಳ ವಿವರ | ಸಂಖ್ಯೆ |
|---|---|---|
| 1 | ವಾಲ್ಮೀಕಿ ಆಶ್ರಮ ಶಾಲೆ | 119 |
| 2 | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ | 135 |
| 3 | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ | 169 |
| | ಒಟ್ಟು | 423 |

- 52894 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಿದೆ.

**ನಿಲಯಾರ್ಥಿಗಳಿಗೆ ಒದಗಿಸುತ್ತಿರುವ ಸೌಲಭ್ಯಗಳ ವಿವರ**

| ವಿವರ | ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ಶಾಲೆ | ಮೆ.ಪೂರ್ವ ವಿ.ನಿಲಯ | ಮೆ.ನಂತರ ವಿ.ನಿಲಯ |
|---|---|---|---|
| ಭೋಜನ ವೆಚ್ಚ (ಮಾಸಿಕ) | 1550/- | 1750/- | 1850/- |

## ಇತರೆ ಸೌಲಭ್ಯಗಳು

ಸಮವಸ್ತ್ರ 2ಜೊತೆ, ಪಠ್ಯ/ನೋಟ್ ಪುಸ್ತಕ, ಶುಚಿ ಸಂಭ್ರಮ ಕಿಟ್, ಶೂ, ಕ್ಷೌರ ವೆಚ್ಚ, ದಿನಪತ್ರಿಕೆ/ Magazine ವೈದ್ಯಕೀಯ ವೆಚ್ಚ, ಸ್ವಚ್ಛತೆ ವೆಚ್ಚ, ಮಂಚ ಹಾಸಿಗೆ, ಹೊದಿಕೆ ದಿಂಬು, ಜಮಖಾನ, ಕ್ರೀಡಾ ಸಾಮಗ್ರಿಗಳು ಹಾಗೂ ಇತರ ಮೂಲಭೂತ ಸೌಲಭ್ಯಗಳು

### ಆ) ವಿದ್ಯಾರ್ಥಿವೇತನ:

**ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (ಡೇ ಸ್ಕಾಲರ್)**

ವಿದ್ಯಾರ್ಥಿನಿಲಯಗಳಲ್ಲಿ ಇಲ್ಲದೇ ಇರುವ ಪರಿಶಿಷ್ಟ ಪಂಗಡದ 1 ರಿಂದ 8ನೇ ತರಗತಿಯವರೆಗಿನ ವಿದ್ಯಾರ್ಥಿಗಳು ತಮ್ಮ ವ್ಯಾಸಂಗವನ್ನು ಮುಂದುವರೆಸುವಂತೆ ಪ್ರೋತ್ಸಾಹಿಸಲು ಹಾಗೂ ವಿದ್ಯಾಭ್ಯಾಸದ ನಡುವೆ ಶಾಲೆ ಬಿಡುವುದನ್ನು ತಪ್ಪಿಸಲು ಮತ್ತು ಪಾಲಕರು ಮಕ್ಕಳನ್ನು ಶಾಲೆಗೆ ಕಳುಹಿಸುವಂತೆ ಉತ್ತೇಜಿಸಲು ಮೆಟ್ರಿಕ್‌ಪೂರ್ವ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.

| ತರಗತಿ | ಬಾಲಕರು | ಬಾಲಕಿಯರು |
|---|---|---|
| 1 ರಿಂ 5 | 1000/- | 1100/- |
| 6 ರಿಂ 7 | 1150/- | 1250/- |
| 8ನೇ ತರಗತಿ | 1250/- | 1350/- |

**ಮೆಟ್ರಿಕ್ ಪೂರ್ವ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ - ಕೇಂದ್ರ ಪುರಸ್ಕೃತ ಯೋಜನೆ**

| ತರಗತಿ | ಬಾಲಕರು | ಬಾಲಕಿಯರು |
|---|---|---|
| 9 ರಿಂದ 10 | 3000/- | 3000/- |

## ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ (ವಾರ್ಷಿಕ)

| ಗುಂಪು | ಕೋರ್ಸ್‌ಗಳು | Hosteller ಮಾಹೆಯಾನ | Day scholar ಮಾಹೆಯಾನ |
|---|---|---|---|
| I | Bachelor, Master Degree, M.phil/PhD degree leading to Degree, PG Diploma in professional courses in various streams | 1200 | 550 |
| II | All non-professional recognized courses leading to a Bachelor, Master Degree, M.Phil/Ph.D degree not covered under Group I in Arts, Science and Commerce like BA/B.Sc/B.com or MA/MSc/M.COM | 820 | 530 |
| III | Vocational stream, ITI courses, 3 year diploma courses in Polytechnics etc | 570 | 300 |
| IV | All post-matriculation level non degree courses for which entrance qualification is High School (Class X), e.g. senior secondary certificate (class XI and XII | 380 | 230 |

**ಇ) ಪ್ರೋತ್ಸಾಹಧನ ಯೋಜನೆ: ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆ:**

ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಈ ಕೆಳಗಿನಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

| ಕೋರ್ಸ್‌ನ ವಿವರ | | ಪ್ರೋತ್ಸಾಹಧನ (ರೂ.ಗಳಲ್ಲಿ) |
|---|---|---|
| ಎಸ್.ಎಸ್.ಎಲ್.ಸಿ | ಶೇ 60 ರಿಂದ ಶೇ 75 | 7,000/- |
| | ಶೇ 75 ಕ್ಕಿಂತ ಮೇಲ್ಪಟ್ಟು | 15,000/- |
| ಪಿ.ಯು.ಸಿ./ಡಿಪ್ಲೊಮ | | 20,000/- |
| ಪದವಿ | | 25,000/- |
| ಸ್ನಾತಕೋತ್ತರ ಪದವಿ | | 30,000/- |
| ವೃತ್ತಿಪರ ಪದವಿ (ವೈದ್ಯಕೀಯ, ತಾಂತ್ರಿಕ, ಕೃಷಿ, ಪಶುವೈದ್ಯಕೀಯ) | | 35,000/- |
| ವಿಶ್ವವಿದ್ಯಾಲಯ ಮಟ್ಟದಲ್ಲಿ PG Courses ವಿವಿಧ ವಿಷಯಗಳಲ್ಲಿ ಗಳಲ್ಲಿ 1 ರಿಂದ 5 ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ | | 50,000/- |

**ಈ) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗದು ಪ್ರಶಸ್ತಿ**

ಸ್ವಾತಂತ್ರ್ಯ ಹೋರಾಟದ ಭಾಗವಾದ ಹಲಗಲಿ ಬೇಡರ ಬಂಡಾಯದಲ್ಲಿ ಹುತಾತ್ಮರಾದ ಜಡಗ ಮತ್ತು ಬಾಲ ಇವರ ಹೆಸರಿನಲ್ಲಿ ಪ್ರತಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ಎಸ್.ಟಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ನಗದು ಪ್ರಶಸ್ತಿ ನೀಡಲಾಗುತ್ತಿದೆ.

**ಉ) ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ.**

ರಾಜ್ಯ ಮಟ್ಟದ ಸಮಿತಿಯಿಂದ ಆಯ್ಕೆ ಮಾಡಲಾದ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪ.ಪಂಗಡ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿ ಮೂಲಕ ಆಯ್ಕೆಗೊಂಡು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲಾಗುತ್ತಿದೆ.

**ಊ) "ಪ್ರಬುದ್ಧ" - ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ಪಡೆಯಲು ಧನಸಹಾಯ:**

ಈ ಯೋಜನೆಯಡಿ ಸರ್ಕಾರದಿಂದ ಅನುಮೋದಿಸಿರುವ ವಿದೇಶದಲ್ಲಿರುವ ವಿಶ್ವವಿದ್ಯಾಲಯಗಳು/ ಶಿಕ್ಷಣ ಸಂಸ್ಥೆಗಳಲ್ಲಿ ಸ್ನಾತಕೋತ್ತರ ಪದವಿ ಮತ್ತು ಪಿಹೆಚ್.ಡಿ ಪದವಿಯನ್ನು ಗಳಿಸಲು ವ್ಯಾಸಂಗ ಮಾಡಲು ಆಯ್ಕೆಯಾದವರಿಗೆ ಸಹಾಯಧನ ಒದಗಿಸಲಾಗುವುದು

**ಋ) ರಾಷ್ಟ್ರೀಯ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಧನಸಹಾಯ:**

ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐ.ಐ.ಟಿ/ಐ.ಐ.ಎಂ/ಐ.ಎಂ.ಐ/ಎನ್.ಐ.ಟಿ/ಇತ್ಯಾದಿ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿಗೆ ರೂ.2.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ.

**ಎ) ವಿದ್ಯಾವಂತ ಯುವಕ/ಯುವತಿಯರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಮತ್ತು ನಿರುದ್ಯೋಗಿ ಜೀವನ ಭತ್ಯೆ:-**

ಪರಿಶಿಷ್ಟ ಪಂಗಡದವರಾದ ಜೇನು ಕುರುಬ ಹಾಗೂ ಕೊರಗ ಸಮುದಾಯದ ವಿದ್ಯಾವಂತ ಯುವಕ/ಯುವತಿಯರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಮತ್ತು ನಿರುದ್ಯೋಗಿ ಜೀವನ ಭತ್ಯೆಯನ್ನು, ಮೈಸೂರು, ಚಾಮರಾಜನಗರ, ಕೊಡಗು, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಮೂಲನಿವಾಸಿಗಳಾದ ಪರಿಶಿಷ್ಟ ಪಂಗಡಗಳಾದ ಜೇನುಕುರುಬ ಹಾಗೂ ಕೊರಗ ಸಮುದಾಯದ ಯುವಕ/ಯುವತಿಯರಿಗೆ ಶೈಕ್ಷಣಿಕ ಪ್ರೋತ್ಸಾಹಧನ ಮತ್ತು ನಿರುದ್ಯೋಗಿಗಳಿಗೆ ಜೀವನ ಭತ್ಯೆಗಳನ್ನು ನೀಡಲಾಗುತ್ತಿದ್ದು ವಿವರ ಈ ಕೆಳಕಂಡಂತಿದೆ.

| ಕ್ರ.ಸಂ | ವಿದ್ಯಾರ್ಹತೆ | ಶೈಕ್ಷಣಿಕ ಪ್ರೋತ್ಸಾಹ ಧನ ವಾರ್ಷಿಕ ರೂ.ಗಳಲ್ಲಿ | ಮಾಸಿಕ ನಿರುದ್ಯೋಗಿ ಜೀವನ ಭತ್ಯೆ |
|---|---|---|---|
| 1 | ಎಸ್.ಎಸ್.ಎಲ್.ಸಿ | 10,000/- | 2,000/- |
| 2 | ಪಿ.ಯು.ಸಿ ಮತ್ತು ತತ್ಸಮಾನ ಕೋರ್ಸುಗಳಿಗೆ ಪ್ರತಿ ವರ್ಷಕ್ಕೆ | 12,000/- | 2,500/- |
| 3 | ಎಲ್ಲಾ ಪದವಿ ಕೋರ್ಸುಗಳ ಪ್ರತಿ ವರ್ಷಕ್ಕೆ | 15,000/- | 3,500/- |
| 4 | ಎಲ್ಲಾ ಸ್ನಾತಕೋತ್ತರ ಕೋರ್ಸುಗಳ ಪ್ರತಿ ವರ್ಷಕ್ಕೆ | [illegible] | [illegible] |

**ಐ) ಕೇಂದ್ರೀಯ ಅನುದಾನದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು:- (ಕೇಂದ್ರ ಸರ್ಕಾರದ ಯೋಜನೆ)**

ಕೇಂದ್ರ ಸರ್ಕಾರದ ಅನುದಾನದಿಂದ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಈ ಕೆಳಕಂಡ ಕಾರ್ಯಕ್ರಮಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

1. ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಸತಿ ಶಾಲೆಗಳು 2. ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಸತಿ ರಹಿತ ಶಾಲೆಗಳು, 3. 10 ಹಾಸಿಗೆಗಳ ಆಸ್ಪತ್ರೆ/ಡಿಸ್ಪೆನ್ಸರಿ 4) ಸಂಚಾರಿ ಆರೋಗ್ಯ ಘಟಕ 5) ವಿವಿಧ ವೃತ್ತಿಗಳಲ್ಲಿ ತರಬೇತಿ. ಸ್ವಯಂ ಸೇವಾ ಸಂಸ್ಥೆಗಳು ಮೇಲ್ಕಾಣಿಸಿದ ಯಾವುದೇ ಯೋಜನೆ ಹಮ್ಮಿಕೊಳ್ಳಬಯಸಿದ್ದಲ್ಲಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿಕಳುಹಿಸಲಾಗುವುದು. ಕೇಂದ್ರ ಸರ್ಕಾರವು ಹಣ ಲಭ್ಯತೆಗನುಗುಣವಾಗಿ ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡಲಾಗುವುದು.

**ಐ) ಪರಿಶಿಷ್ಟ ಪಂಗಡದ ಆದಿವಾಸಿ ಪಂಗಡಕ್ಕೆ ಸೇರಿದ ಜೇನುಕುರುಬ ಮತ್ತು ಕೊರಗ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ:-**

ಪರಿಶಿಷ್ಟ ಪಂಗಡದ ಆದಿವಾಸಿ ಪಂಗಡಕ್ಕೆ ಸೇರಿದ ಜೇನುಕುರುಬ ಮತ್ತು ಕೊರಗ ಜನಾಂಗಕ್ಕೆ ಸೇರಿದ 7ನೇ ತರಗತಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ರೂ.2,500/- ಮತ್ತು 10ನೇ ತರಗತಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ರೂ.5,000/- ಗಳ ಪ್ರೋತ್ಸಾಹ ಧನವನ್ನು ನೀಡಲಾಗುತ್ತಿದೆ.

**ಒ) ಪರಿಶಿಷ್ಟ ಪಂಗಡದ ಸಂಘ-ಸಂಸ್ಥೆಗಳು/ಧಾರ್ಮಿಕ ಸಂಸ್ಥೆಗಳ ವತಿಯಿಂದ ನಡೆಸಲಾಗುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಶಾಲಾ/ ಕಾಲೇಜು/ ವಿದ್ಯಾರ್ಥಿನಿಲಯ/ ಸಮುದಾಯ ಭವನಗಳನ್ನು ನಿರ್ಮಿಸಲು ಧನಸಹಾಯ ನೀಡಲಾಗುತ್ತಿದೆ.**

- ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ – ರೂ.10.00 ಲಕ್ಷ
- ತಾಲ್ಲೂಕು ಕೇಂದ್ರ ಸ್ಥಾನ - ರೂ.25.00 ಲಕ್ಷ
- ಜಿಲ್ಲಾ ಕೇಂದ್ರ ಸ್ಥಾನ - ರೂ.50.00 ಲಕ್ಷ

ಉ) **ಮಾಜಿ ದೇವದಾಸಿ ಮಕ್ಕಳ ವಿವಾಹ:**

ಪರಿಶಿಷ್ಟ ಪಂಗಡದ ಮಾಜಿ ದೇವದಾಸಿಯರ ಮಕ್ಕಳು ಇತರೆ ಜಾತಿಯ ಯುವಕರನ್ನು ವಿವಾಹವಾದಲ್ಲಿ 3.00 ಲಕ್ಷ ಹಾಗೂ ಮಾಜಿ ದೇವದಾಸಿಯರ ಗಂಡು ಮಕ್ಕಳು ಇತರ ಜಾತಿಯ ಹುಡುಗಿಯನ್ನು ವಿವಾಹವಾದಲ್ಲಿ ರೂ 5.00 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುವುದು.

ಊ) **ಅಂತರಜಾತಿ ವಿವಾಹ**

ಅಸ್ಪೃಶ್ಯತಾ ನಿವಾರಣೆ ಉದ್ದೇಶದಿಂದ ಅಂತರ್ಜಾತಿ ವಿವಾಹಿತ ದಂಪತಿಗಳಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

ಪರಿಶಿಷ್ಟ ಪಂಗಡದ ಯುವಕರು ಇತರ ಪಂಗಡದ ಯುವತಿಯರನ್ನು ವಿವಾಹವಾದಲ್ಲಿ ಅಂತಹ ದಂಪತಿಗಳಿಗೆ ರೂ 2.50 ಲಕ್ಷಗಳ ಪ್ರೋತ್ಸಾಹಧನ

ಪರಿಶಿಷ್ಟ ಪಂಗಡದ ಯುವತಿಯರು ಇತರ ಜಾತಿಯ ಯುವಕರನ್ನು ವಿವಾಹವಾದಲ್ಲಿ ಅಂತಹ ದಂಪತಿಗಳಿಗೆ ರೂ 3.00 ಲಕ್ಷಗಳ ಪ್ರೋತ್ಸಾಹಧನ

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು